## ಕರ್ನಾಟಕ ಸರ್ಕಾರ

**ಸಂಖ್ಯೆ**:ಆಕುಕ 10 ಎಂಎಸ್ಎಫ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:05.10.2021

## ಅಧಿಸೂಚನೆ

ನೆಫ್ರೋ-ಯುರಾಲಜಿ ಸಂಸ್ಥೆ, ಬೆಂಗಳೂರು ಇಲ್ಲಿ ಖಾಲಿ ಇರುವ ಖಾಯಂ ನಿರ್ದೇಶಕರ ಹುದ್ದೆಯ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಸದರಿ ಅರ್ಜಿಗಳನ್ನು ಈ ಕೆಳಕಂಡ ನಿಗದಿತ ಕನಿಷ್ಠ ವಿದ್ಯಾರ್ಹತೆ ಮತ್ತು ಇತರೆ ವಿವರಗಳು ಎನ್.ಎಂ.ಸಿ/ಎಂ.ಸಿ.ಐ ನಿಯಮಾವಳಿಗಳನ್ವಯ ಮತ್ತು ಸದರಿ ಸಂಸ್ಥೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಹಾಗೂ ಸಂಸ್ಥೆಯ ಬೈಲಾಗಳನ್ವಯ ಪರಿಗಣಿಸಲಾಗುವುದು.

**ಅರ್ಹತಾ ಮಾನದಂಡಗಳು:**

1. ಭಾರತೀಯ ವೈದ್ಯಕೀಯ ಪರಿಷತ್ತಿನಿಂದ ಮಾನ್ಯತೆ ಪಡೆದ ವಿಶ್ವ ವಿದ್ಯಾಲಯದಿಂದ ನೆಫ್ರೋಲಾಜಿ ಅಥವಾ ಯುರಾಲಜಿ ವಿಭಾಗದಲ್ಲಿ ಸ್ನಾತಕೋತ್ತರ ಪದವಿಯನ್ನು ಹೊಂದಿರಬೇಕು.
2. ಸ್ನಾತಕೋತ್ತರ ಪದವಿಯನ್ನು ಪಡೆದ ಪ್ರಾಧ್ಯಾಪಕರು ಹಾಗೂ ಯಾವುದೇ ಇತರ ಸಮಾನ ಹುದ್ದೆಯಲ್ಲಿ 5 ವರ್ಷಗಳ ಕಾಲ ಕರ್ತವ್ಯ ನಿರ್ವಹಿಸಿದವರಿಗೆ ಆದ್ಯತೆ ನೀಡಲಾಗುವುದು ಹಾಗೂ ನೆಫ್ರೋಲಾಜಿ ಅಥವಾ ಯುರಾಲಜಿ ವಿಭಾಗದಲ್ಲಿ ಕನಿಷ್ಠ 10 ವರ್ಷಗಳಿಗಿಂತ ಕಡಿಮೆ ಇಲ್ಲದ ಬೋಧನಾ ಅನುಭವವನ್ನು ಹೊಂದಿರಬೇಕು.
3. ಸದರಿ ನೇಮಕಾತಿಯಲ್ಲಿ ವಿಭಾಗದ ಮುಖ್ಯಸ್ಥರುಗಳಿಗೆ ಆದ್ಯತೆಯನ್ನು ನೀಡಲಾಗುವುದು.
4. ಅರ್ಜಿ ಸಲ್ಲಿಸುವ ಅಭ್ಯರ್ಥಿಯ ವಯಸ್ಸು 70 ವರ್ಷಗಳನ್ನು ಮೀರಿರಬಾರದು ಅಥವಾ ವಯೋನಿವೃತ್ತಿ ಹೊಂದಲು ಕನಿಷ್ಠ 2 ವರ್ಷಗಳ ಸೇವಾ ಅವಧಿ ಬಾಕಿ ಇರಬೇಕು.
5. ನಿರ್ದೇಶಕರ ಆಯ್ಕೆಯನ್ನು ಭಾರತೀಯ ವೈದ್ಯಕೀಯ ಪರಿಷತ್ತಿನ ನಿಯಮಾವಳಿ ಪ್ರಕಾರ ಹಾಗೂ ಸಂಸ್ಥೆಗಳ ಬೈಲಾ ರೀತ್ಯಾ ಮಾಡಲಾಗುವುದು.
6. ಸಂಸ್ಥೆಯ ಒಟ್ಟಾರೆ ನಿರ್ವಹಣೆ ಮತ್ತು ಆಡಳಿತದ ನಿಯಂತ್ರಕರು ನಿರ್ದೇಶಕರೇ ಆಗಿರುತ್ತಾರೆ.

**ವೇತನ ಶ್ರೇಣಿ:-** ರೂ.1,44,200-2,18,200/- ಮತ್ತು ಅನ್ವಯವಾಗುವ ಇತರೆ ಭತ್ಯೆಗಳು.

**ಸೇವಾವಧಿ:-**

ನೇಮಕಾತಿಯ ದಿನಾಂಕದಿಂದ 4 ವರ್ಷಗಳು, ಅಥವಾ ಸಂಸ್ಥೆಯ ಬೈಲಾದನ್ವಯ ಅಥವಾ ಸರ್ಕಾರದ ಮುಂದಿನ ಆದೇಶದವರೆಗೆ (ಯಾವುದು ಮೊದಲೊ ಅಲ್ಲಿಯವರೆಗೆ)

**ಸೂಚನೆಗಳು: -**

ನಿಗದಿತ ಅರ್ಜಿ ನಮೂನೆಯನ್ನು ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ ವೆಬ್‌ಸೈಟ್: https://dme.karnataka.gov.in ಅಥವಾ ನೆಫ್ರೋ-ಯುರಾಲಜಿ ಸಂಸ್ಥೆಯ ವೆಬ್‌ಸೈಟ್ www.nephrourology.in ನಿಂದ ಡೌನ್‌ಲೋಡ್ ಮಾಡಿಕೊಂಡು, ವೈದ್ಯಕೀಯ ಶಿಕ್ಷಣ ನಿರ್ದೇಶಕರು, ಬೆಂಗಳೂರು ಇವರ ಹೆಸರಿನಲ್ಲಿ ರೂ.5000/-ಗಳ ಡಿಮ್ಯಾಂಡ್ ಡ್ರಾಫ್ಟ್ ಅನ್ನು (ಹಿಂದಿರುಗಿಸಲಾಗದಿರುವ) ಪಡೆದು ದಾಖಲೆಗಳೊಂದಿಗೆ ಭರ್ತಿ ಮಾಡಿದ ಅರ್ಜಿಯನ್ನು ಮುದ್ದಾಂ ಅಥವಾ ನೋಂದಾಯಿತ ಅಂಚೆ ಮುಖಾಂತರ ಸ್ವೀಕೃತಿ ಬಾಕಿ ಪತ್ರದೊಂದಿಗೆ ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು ಇಲ್ಲಿ ಸಲ್ಲಿಸುವುದು.

**ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ**: 22.10.2021, ಸಂಜೆ:4.00 ಗಂಟೆಯೊಳಗೆ ಮತ್ತು ಸಂದರ್ಶನದ ದಿನಾಂಕ ಮತ್ತು ಸ್ಥಳವನ್ನು ನಂತರ ತಿಳಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

5/10/21

**(ಜೆ. ಕುಮಾರಸ್ವಾಮಿ)**
ಸರ್ಕಾರದ ಅಧೀನ ಕಾರ್ಯದರ್ಶಿ-1,